**All India Radio: Bangalore**
**Regional Bulletin In Kannada**
**25.01.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**25.01.2026 / 2.30 p.m.**
**<><><><>**

ಮುಖ್ಯಾಂಶಗಳು

1. ಮತದಾನದ ಹಕ್ಕು ಸಂಭ್ರಮಿಸಲು ಯುವಕರಿಗೆ ಮನ್ ಕೀ ಬಾತ್ ನಲ್ಲಿ ಪ್ರಧಾನಿ ನರೇಂದ್ರ ಮೋದಿ ಕರೆ
2. ಬೆಂಗಳೂರಿನಲ್ಲಿ 'ಸೋಫಾ ತ್ಯಾಜ್ಯ' ನಿರ್ವಹಣೆ ಕುರಿತು ಮನದ ಮಾತಿನಲ್ಲಿ ಪ್ರಧಾನಿ ಶ್ಲಾಘನೆ
3. ರಾಜ್ಯದಲ್ಲಿ ಹೂಡಿಕೆಗೆ ಪೂರಕ ವಾತಾವರಣ ; ನಿಪುಣ ಮಾನವ ಸಂಪನ್ಮೂಲ - ಮುಖ್ಯಮಂತ್ರಿ ಸಿದ್ದರಾಮಯ್ಯ
4. ರಾಷ್ಟ್ರೀಯ ಮತದಾರರ ದಿನ ; ರಾಜ್ಯಾದ್ಯಂತ ಜಿಲ್ಲಾಡಳಿತಗಳಿಂದ ಜಾಗೃತಿ ಕಾರ್ಯಕ್ರಮ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ೧೩೦ನೇ ಆವೃತ್ತಿಯ ತಮ್ಮ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದ ಮೂಲಕ ಸಮಸ್ತ ಭಾರತೀಯರನ್ನುದ್ದೇಶಿಸಿ ಮಾತನಾಡಿದರು. ಗಣರಾಜ್ಯೋತ್ಸವದ ಮುನ್ನಾದಿನವಾದ ಇಂದು ಪ್ರಸಾರವಾದ ೨೦೨೬ರ ಸಾಲಿನ ಮೊದಲ 'ಮನ್ ಕಿ ಬಾತ್' ಸಂಚಿಕೆಯಲ್ಲಿ ಪ್ರಧಾನಿಯವರು ಪ್ರಜಾಪ್ರಭುತ್ವದ ಮೌಲ್ಯಗಳು, ನವೋದ್ಯಮಗಳ ಯಶಸ್ಸು ಮತ್ತು ಸ್ವಚ್ಛತೆಯ ಬಗ್ಗೆ ಮಹತ್ವದ ವಿಚಾರಗಳನ್ನು ಹಂಚಿಕೊಂಡರು. ಇಂದು 'ರಾಷ್ಟ್ರೀಯ ಮತದಾರರ ದಿನ'ವಾಗಿದ್ದು, ಮತದಾರನೇ ಪ್ರಜಾಪ್ರಭುತ್ವದ ಆತ್ಮ ಎಂದು ಪ್ರಧಾನಿ ಬಣ್ಣಿಸಿದರು. ೧೮ ವರ್ಷ ತುಂಬಿದ ಯುವಜನರು ಮತದಾರರಾಗಿ ನೋಂದಾಯಿಸಿಕೊಳ್ಳುವುದನ್ನು ಸಂಭ್ರಮಿಸಬೇಕು ಮತ್ತು ಈ ಮೂಲಕ ಪ್ರಜಾಪ್ರಭುತ್ವವನ್ನು ಬಲಪಡಿಸಬೇಕು ಎಂದು ಅವರು ಕರೆ ನೀಡಿದರು. 'ಸ್ಟಾರ್ಟ್-ಅಪ್ ಇಂಡಿಯಾ' ಅಭಿಯಾನಕ್ಕೆ ಹತ್ತು ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ, ಭಾರತವು ಇಂದು ವಿಶ್ವದ ಮೂರನೇ ಅತಿದೊಡ್ಡ ನವೋದ್ಯಮ ಪರಿಸರ ವ್ಯವಸ್ಥೆಯಾಗಿ ಹೊರಹೊಮ್ಮಿದೆ ಎಂದು ಪ್ರಧಾನಿ ಹರ್ಷ ವ್ಯಕ್ತಪಡಿಸಿದರು. ಬಾಹ್ಯಾಕಾಶ, ಕೃತಕ ಬುದ್ಧಿಮತ್ತೆ ಮತ್ತು

ಹಸಿರು ಹೈಡ್ರೋಜನ್‌ನಂತಹ ಅತ್ಯಾಧುನಿಕ ಕ್ಷೇತ್ರಗಳಲ್ಲಿ ಭಾರತೀಯ ಯುವಕರು ಸಾಧನೆ ಮಾಡುತ್ತಿದ್ದಾರೆ ಎಂದರು. ಸ್ವಚ್ಛತಾ ಅಭಿಯಾನದ ಬಗ್ಗೆ ಮಾತನಾಡುತ್ತಾ ಪ್ರಧಾನಿಯವರು ರಾಜ್ಯ ರಾಜಧಾನಿ ಬೆಂಗಳೂರನ್ನು ವಿಶೇಷವಾಗಿ ಉಲ್ಲೇಖಿಸಿದರು. ಬೆಂಗಳೂರಿನಲ್ಲಿ 'ಸೋಫಾ ತ್ಯಾಜ್ಯ' ಒಂದು ದೊಡ್ಡ ಸಮಸ್ಯೆಯಾಗಿ ಪರಿಣಮಿಸಿತ್ತು. ಇದನ್ನು ಮನಗಂಡ ಕೆಲವು ವೃತ್ತಿಪರರು ಒಗ್ಗೂಡಿ, ಹಳೆಯ ಸೋಫಾಗಳನ್ನು ವೈಜ್ಞಾನಿಕವಾಗಿ ಮರುಬಳಕೆ ಮಾಡುವ ಮೂಲಕ ಈ ಸಮಸ್ಯೆಗೆ ನವೀನ ಪರಿಹಾರ ಕಂಡುಕೊಂಡಿದ್ದಾರೆ ಎಂದು ಪ್ರಧಾನಿ ಶ್ಲಾಘಿಸಿದರು. ಇಂತಹ ಪ್ರಯತ್ನಗಳು ಇತರ ನಗರಗಳಿಗೆ ಮಾದರಿ ಎಂದು ಅವರು ತಿಳಿಸಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೫ ಸೆಕೆಂಡ್‌ಗಳು)

ಭಾರತೀಯ ಉತ್ಪನ್ನಗಳು ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳಬೇಕಾದರೆ 'ಗುಣಮಟ್ಟ' ನಮ್ಮ ಮಂತ್ರವಾಗಬೇಕು. ಈಗ ಶ್ರೇಷ್ಠತೆಯನ್ನೇ ಗುರಿಯಾಗಿಸಿಕೊಳ್ಳಬೇಕು ಎಂದು ಪ್ರಧಾನಿ ಉದ್ಯಮ ಜಗತ್ತಿಗೆ ಕರೆ ನೀಡಿದರು. ಚಳಿಗಾಲದ ಈ ಸಮಯದಲ್ಲಿ ಪೌಷ್ಟಿಕಾಂಶಯುಕ್ತ ಸಿರಿಧಾನ್ಯಗಳ ಸೇವನೆಯನ್ನು ಹೆಚ್ಚಿಸಬೇಕು ಎಂದು ಅವರು ದೇಶವಾಸಿಗಳಿಗೆ ಸಲಹೆ ನೀಡಿದರು. ಫೆಬ್ರವರಿಯಲ್ಲಿ ಭಾರತದಲ್ಲಿ ನಡೆಯಲಿರುವ 'ಇಂಡಿಯಾ ಎಐ ಇಂಪ್ಯಾಕ್ಟ್ ಸಮ್ಮಿಟ್' ಬಗ್ಗೆ ಮಾಹಿತಿ ನೀಡುತ್ತಾ ಪ್ರಧಾನಿ, ಇದು ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಭಾರತದ ಪ್ರಗತಿ ಮತ್ತು ಸಾಧನೆಗಳನ್ನು ವಿಶ್ವದ ಮುಂದಿಡಲಿದೆ ಎಂದು ಹೇಳಿದರು.

<><><><>

ಇಂದು ದೇಶಾದ್ಯಂತ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತಿದೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಿಲ್ಲಾಡಳಿತಗಳು, ಸ್ಥಳೀಯ ಯುವಕರಲ್ಲಿ ಮತದನದ ಚುನಾವಣಾ ಪ್ರಕ್ರಿಯೆ ಹಾಗೂ ಪ್ರಜಾಪ್ರಭುತ್ವ ಮೌಲ್ಯದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿವೆ. ಚುನಾವಣಾ ಆಯೋಗದ ನಿರ್ದೇಶನದಂತೆ ಹೊಸ ಮತದಾರರ ನೋಂದಣಿ ಅಭಿಯಾನ ಹಾಗೂ ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿಯ ಸಂಯುಕ್ತಾಶ್ರಯದಲ್ಲಿ ಇಂದು ಕೋಲಾರ ನಗರದಲ್ಲಿ ಜನಜಾಗೃತಿ ಜಾಥಾ ಹಾಗೂ ಸೈಕಲ್ ಜಾಥಾ ನಡೆಯಿತು. ವಿದ್ಯಾರ್ಥಿಗಳ ಜಾಥಾಗೆ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೈಕಲ್ ತುಳಿಯುವ ಮೂಲಕ ಚಾಲನೆ ನೀಡಿದರು. ಪ್ರಜಾಪ್ರಭುತ್ವದಲ್ಲಿ

ಮತದಾರರ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಸಲುವಾಗಿ ಇಂದು ರಾಷ್ಟ್ರೀಯ ಮತದಾರರ ದಿನಾಚರಣೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ,ಸ್ವೀಪ್ ಸಮಿತಿ, ಚುನಾವಣಾ ಆಯೋಗದ ವತಿಯಿಂದ ನಡೆದ ಮತದಾರರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಧಾನ ಹಿರಿಯ ನ್ಯಾಯಾಧೀಶರಾದ ಎಚ್.ವಿ.ಶಿಲ್ಪಾ ಮಾತನಾಡಿ, ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವ ದೇಶವಾದ ಭಾರತದಲ್ಲಿ ಉತ್ತಮ ಸರ್ಕಾರ ರಚನೆಗಾಗಿ ಮತದಾನದ ಪ್ರಾಮುಖ್ಯತೆಯಿದೆ. ಮತದಾನದ ಪ್ರಮಾಣ ಕಡಿಮೆಯಾದರೆ ಚುನಾವಣಾ ಫಲಿತಾಂಶದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ ಎಂದರು. ಸಧೃಢ ರಾಷ್ಟ್ರ ನಿರ್ಮಾಣ ಮಾಡುವಲ್ಲಿ ಮತದಾನದ ಪಾತ್ರ ಬಹು ಮುಖ್ಯವಾಗಿದ್ದು, ಮತದಾನದ ಹಕ್ಕನ್ನು ಪಡೆದಂತಹ ಪ್ರತಿಯೊಬ್ಬ ಅರ್ಹ ಮಾತದಾರರು ಚುನಾವಣೆಗಳಲ್ಲಿ ತಪ್ಪದೇ ತಮ್ಮ ಹಕ್ಕನ್ನು ಚಲಾಯಿಸಬೇಕೆಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀದರ್ ತಿಳಿಸಿದ್ದಾರೆ. ಗದಗ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಜರುಗಿದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

<><><><>

ಫೆಬ್ರವರಿ ೧ರಂದು ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಒಕ್ಕೂಟ ಚಿಮುಲ್‌ನ ಚುನಾವಣೆ ನಡೆಯಲಿದ್ದು, ಅಂತಿಮವಾಗಿ ಚುನಾವಣಾ ಕಣದಲ್ಲಿ ೨೮ ಅಭ್ಯರ್ಥಿಗಳು ಇದ್ದಾರೆ. ಒಟ್ಟು ೪೩ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು. ಈ ಪೈಕಿ ಒಂದು ನಾಮಪತ್ರ ತಿರಸ್ಕೃತಗೊಂಡಿದ್ದು, ೧೪ ಅಭ್ಯರ್ಥಿಗಳು ನಾಮತ್ರಗಳನ್ನು ನಿನ್ನೆ ಹಿಂಪಡೆದರು. ಚಿಮುಲ್ ನ ಆಡಳಿತ ಮಂಡಳಿಯಲ್ಲಿ ಒಟ್ಟು ೧೮ ನಿರ್ದೇಶಕ ಸ್ಥಾನಗಳಿದ್ದು, ಇದರಲ್ಲಿ ೧೩ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಉಳಿದ ೦೫ ಸ್ಥಾನಗಳ ನಾಮನಿರ್ದೇಶನದ ಮೂಲಕ ಆಯ್ಕೆಯಾಗುವ ಸ್ಥಾನಗಳಾಗಿವೆ. ಚಿಮುಲ್ ವ್ಯಾಪ್ತಿಯಲ್ಲಿ ಒಟ್ಟು ೬೫೨ ಅರ್ಹ ಮತದಾರರಿದ್ದಾರೆ. ಫೆವ್ರವರು ೧ರಂದು ಚಿಕ್ಕಬಳ್ಳಾಪುರ ನಗರದ ಸರ್ಕಾರಿ ಜ್ಯೂನಿಯರ್ ಕಾಲೇಜಿನಲ್ಲಿ ಮತದಾನ ನಡೆಯಲಿದೆ.

<><><><>

ರಾಜ್ಯದಲ್ಲಿ ಹೂಡಿಕೆಗೆ ಪೂರಕ ವಾತಾವರಣವಿದ್ದು, ನಿಪುಣ ಮಾನವ ಸಂಪನ್ಮೂಲವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರು ವಿಮಾನ ನಿಲ್ದಾಣದಲ್ಲಿಂದು

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೌಶಲ್ಯ ತರಬೇತಿ ಪಡೆದ ಯುವಕರಿಗೆ ಉದ್ಯೋಗ ಖಾತರಿ ನೀಡುವ ನಿಟ್ಟಿನಲ್ಲಿ ಸರ್ಕಾರ ಶ್ರಮಿಸುತ್ತಿದೆ ಎಂದರು.

**ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೨೦ ಸೆಕೆಂಡ್‌ಗಳು)**

ವಿಧಾನಸಭೆಯ ಇತ್ತೀಚಿನ ವಿದ್ಯಾಮಾನಗಳ ಕುರಿತು ಮಾತನಾಡಿದ ಅವರು, ರಾಜ್ಯ ಸರ್ಕಾರ ನೀಡುವ ಭಾಷಣವನ್ನು ಓದುವುದು ರಾಜ್ಯಪಾಲರ ಕರ್ತವ್ಯ. ಇದರಲ್ಲಿ ಅವರಿಗೆ ವಿವೇಚನಾಧಿಕಾರ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಹಾಗೆಯೇ ನಾಳಿನ ಗಣರಾಜ್ಯೋತ್ಸವ ಭಾಷಣವನ್ನು ಅವರು ಬದಲಿಸುವ ಸಾಧ್ಯತೆ ಇರುತ್ತದೆ ಎಂದರು. ಗಣರಾಜ್ಯೋತ್ಸವ ಮೆರವಣಿಗೆಯಲ್ಲಿ ಕರ್ನಾಟಕದ ಸ್ತಬ್ಧಚಿತ್ರಕ್ಕೆ ಅವಕಾಶ ಸಿಗದ ಕುರಿತು ಮಾತನಾಡಿದ ಅವರು, ಸರ್ಕಾರದಿಂದ ಎಲ್ಲಾ ಪ್ರಕ್ರಿಯೆಗಳು ನಡೆದಿವೆ. ಅಂತಿಮವಾಗಿ ಆಯ್ಕೆ ಮಾಡುವುದು ಕೇಂದ್ರ ಸರ್ಕಾರದ ಜವಾಬ್ದರಿಯಾಗಿದೆ ಎಂದು ತಿಳಿಸಿದರು.

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಚುನಾವಣೆಗೂ ಮುನ್ನ ಮತದಾರರ ಪಟ್ಟಿಯನ್ನು ಖುದ್ದು ಪರಿಶೀಲನೆ ನಡೆಸುವಂತೆ ಅಧಿಕಾರಿಗಳಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಎಂ ಮಹೇಶ್ವರ ರಾವ್ ಸೂಚನೆ ನೀಡಿದ್ದಾರೆ. ಬೆಂಗಳೂರಿನ ಟೌನ್ ಹಾಲ್‌ನಲ್ಲಿ ನಿನ್ನೆ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಚುನಾವಣೆಗೆ ಸಂಬಂಧಿಸಿದಂತೆ ಜನವರಿ ೨೨ರಂದು ರಾಜ್ಯ ಚುನಾವಣಾ ಆಯೋಗ ಪರಿಷ್ಕೃತ ಸುತ್ತೋಲೆಯನ್ನು ಹೊರಡಿಸಿದೆ. ಅದರಂತೆ, ಎಲ್ಲಾ ಐದು ಪಾಲಿಕೆಗಳ ಅಧಿಕಾರಿಗಳಿಗೆ ಸೂಕ್ತ ಕ್ರಮಗಳನ್ನು ತೆಗೆದುಕೊಂಡು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ ಎಂದು ಹೇಳಿದರು.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಚಿಕ್ಕತುಮಕೂರು ಕೆರೆಯ ಬಳಿ ಕೈಗಾರಿಕೆಗಳ ತ್ಯಾಜ್ಯ ಶುದ್ದೀಕರಣ ಘಟಕ ಹಾಗೂ ಮೂರನೇ ಹಂತದಲ್ಲಿ ಶುದ್ದೀಕರಣ ಮಾಡಲು ಅನುದಾನ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಅರ್ಕಾವತಿ ನದಿ ಪಾತ್ರದ ಕೆರೆ ಸಂರಕ್ಷಣಾ ವೇದಿಕೆ ಹಾಗೂ ಕೆರೆ ಹೋರಾಟ ಸಮಿತಿ ನೇತೃತ್ವದಲ್ಲಿ ಮೂರು ದಿನಗಳಿಂದ ನಡೆಯುತ್ತಿದ್ದ ಉಪವಾಸ ಸತ್ಯಾಗ್ರಹವನ್ನು ಮುಖ್ಯಮಂತ್ರಿಗಳ ಭರವಸೆ ಮೇರೆಗೆ ಹಿಂತೆಗೆದುಕೊಳ್ಳಲಾಗಿದೆ.

ತ್ಯಾಜ್ಯ ಶುದ್ಧೀಕರಣ ಘಟಕ ಕಾಮಗಾರಿಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅನುದಾನ ನೀಡುವ ಭರವಸೆ ನೀಡಿದ್ದು, ನಾಡಿದ್ದು ಈ ಬಗ್ಗೆ ಸಂಬಂಧಪಟ್ಟವರೊಂದಿಗೆ ಸಭೆ ನಡೆಸಲಿದ್ದಾರೆ. ಹೀಗಾಗಿ ಉಪವಾಸ ಸತ್ಯಾಗ್ರಹ ಕೈಬಿಡುವಂತೆ ತಹಶೀಲ್ದಾರ್ ಡಾ.ಮಲ್ಲಪ್ಪ ಕೆ.ಯರಗೋಳ ಮಾಡಿದ ಮನವಿಗೆ ಪ್ರತಿಭಟನಾಕಾರರು ಸ್ಪಂಧಿಸಿ ಸತ್ಯಾಗ್ರಹ ಹಿಂತೆಗೆದುಕೊಂಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>